## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ದಿನಾಂಕ: 20-08-2022

ಸಂಖ್ಯೆ: ಸ.ಅ/ವಾ-164/ 01 /2022-23

### ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 20-08-2022 ರಂದು ವಾರ್ಡ್ ಸಂಖ್ಯೆ: 164, ವಿದ್ಯಾಪೀಠದ ವಾರ್ಡ್ ಕಛೇರಿಯಲ್ಲಿ ನಡೆದ ಆಗಸ್ಟ್ ತಿಂಗಳ ಮೂರನೇ ಶನಿವಾರದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಸಂಜೆ 4.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ಎಂ. ರಮೇಶ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-164, ವಿದ್ಯಾಪೀಠ |
| 3 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 4 | ಶ್ರೀ ಸತೀಶ್ ಆರ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 164 |
| 5 | ಶ್ರೀ ಕೃಷ್ಣ.ಜಿ.ಕೆ | ಅಭಿಯಂತರರು (ಬೆಸ್ಕಾಂ) |
| 6 | ಮಾಲಿನಿ | ಬೀದಿ ದೀಪ್ ನಿರ್ವಹಣೆಗಾರರು |
| 7 | ಶ್ರೀ ವೈ.ಎಸ್. ಶಿವಲಿಂಗಯ್ಯ | ಪತ್ರಕರ್ತರು |
| 8 | ಶ್ರೀ ಜಿ.ಎನ್. ರೆಡ್ಡಿ | ಘ.ತ್ಯಾ.ನಿ ಗುತ್ತಿಗೆದಾರರು |
| 9 | ಶ್ರೀ ಗೋಪಾಲ ನಾಯಕ್ | ಮಾರ್ಷಲ್ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಹಿಂದಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ಕತ್ರಿಗುಪ್ಪೆ ಮುಖ್ಯರಸ್ತೆಯಲ್ಲಿ ಎಲ್ಲಾ ಬೀದಿ ದೀಪಗಳು ಉರಿಯುತ್ತಿದ್ದು, ವಾರ್ಡಿನಲ್ಲಿ ಯಾವುದೇ ದೂರುಗಳು ಬರದಂತೆ ಬೀದಿ ದೀಪಗಳ ನಿರ್ವಹಣೆ ಮಾಡಲಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಲಾಗಿರುತ್ತದೆ ಹಾಗೂ ಬೀದಿ ದೀಪಗಳ ನಿರ್ವಹಣೆ ಗುತ್ತಿಗೆದಾರರ ಹೆಸರು ಮತ್ತು ದೂರವಾಣಿ ಸಂಖ್ಯೆ ಇರುವ ನಾಮಫಲಕವನ್ನು ವಾರ್ಡ್ ವ್ಯಾಪ್ತಿಯ ಎಲ್ಲಾ ಉದ್ಯಾನವನಗಳಲ್ಲಿ ಅಳವಡಿಸಲಾಗಿದೆ ಎಂದು ಬೀದಿ ದೀಪಗಳ ನಿರ್ವಹಣೆಗಾರರ ಪರವಾಗಿ ಹಾಜರಿದ್ದ ಶ್ರೀಮತಿ ಮಾಲಿನಿಯವರು ಸಭೆಯಲ್ಲಿ ತಿಳಿಸಿರುತ್ತಾರೆ. ಹಾಗೂ ಬೀದಿ ದೀಪಗಳ ಸುತ್ತ ಅಡ್ಡಲಾಗಿರುವ ಮರದ ರೆಂಬೆಕೊಂಬೆಗಳನ್ನು ಟ್ರಿಮ್ ಮಾಡಲು ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

2. ವಾರ್ಡ್ ವ್ಯಾಪ್ತಿಯಲ್ಲಿ ಬರುವ 6ನೇ ಅಡ್ಡರಸ್ತೆ, ಅಶೋಕನಗರ ಹಾಗೂ ಇತರೆ ರಸ್ತೆಗಳಲ್ಲಿಯೂ ಸಹ ಬೀದಿಗಳಿಗೆ ಅಡ್ಡಲಾಗಿ ಬೆಳೆದಿರುವ ಮರಗಳ ಬಳಿ ಕೇಬಲ್‌ಗಳು ಬಾಗಿದ್ದು, ಬಾಗಿರುವ ಸದರಿ ಕೇಬಲ್‌ನ್ನು ಸೂಕ್ತ ರೀತಿಯಲ್ಲಿ ಸರಿಪಡಿಸಿ ಸಾರ್ವಜನಿಕ ಆಸ್ತಿಪಾಸ್ತಿಗೆ ತೊಂದರೆಯಾಗದ ರೀತಿಯಲ್ಲಿ ಕ್ರಮವಹಿಸುವಂತೆ ಸಭೆಯಲ್ಲಿ ಪ್ರಸ್ತಾಪಿಸಲಾಗಿ ಈ ವಿಚಾರವನ್ನು ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಭಿಯಂತರರಿಗೆ ಅಧ್ಯಕ್ಷರು ತಿಳಿಸಿರುತ್ತಾರೆ.

3. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಕಂಬ, ತಂತಿ ಮತ್ತು ಕೇಬಲ್‌ಗಳ ಮೇಲೆ ಬಾಗಿರುವ ಮರದ ರೆಂಬೆಕೊಂಬೆಗಳನ್ನು ಟ್ರಿಮ್ ಮಾಡಿ, ಸದರಿ ರೆಂಬೆಕೊಂಬೆಗಳನ್ನು ರಸ್ತೆಯಲ್ಲಿಯೇ ಬಿಟ್ಟಿರುವುದನ್ನು ಆರೋಗ್ಯ ಪರಿವೀಕ್ಷಕರು ಹಾಗೂ ವಾರ್ಡ್ ಅಭಿಯಂತರರು ಗಮನಿಸಿದ್ದು, ಈ ಸಂಧರ್ಭದಲ್ಲಿ ರೆಂಬೆಕೊಂಬೆಗಳ ಮೇಲೆ ಅನಾಮಧೇಯರು ಕಸವನ್ನು ತಂದು ಸುರಿಯುತ್ತಿರುವುದಾಗಿ, ಇದರಿಂದ ಸೊಳ್ಳೆಗಳು ಉತ್ಪತ್ತಿಯಾಗುತ್ತಿದ್ದು, ಮಳೆಯ ಕಾರಣ ಕೊಳೆತು ವಾಸನೆ ಬರುತ್ತಿರುವ ಬಗ್ಗೆ ಸಾರ್ವಜನಿಕರಿಂದ ಪ್ರತಿ ದಿನ ವಾರ್ಡ್ ಕಛೇರಿಗೆ ದೂರುಗಳು ಬರುತ್ತಿರುವ ಹಿನ್ನಲೆಯಲ್ಲಿ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ನೀವು ತೆಗೆದಿರುವ ರೆಂಬೆಕೊಂಬೆಗಳನ್ನು ಸೂಕ್ತ ರೀತಿಯಲ್ಲಿ ತೆರವುಗೊಳಿಸುವಂತೆ ಸಭೆಯಲ್ಲಿ ಅಧ್ಯಕ್ಷರು ತಿಳಿಸಿರುತ್ತಾರೆ.

4. ವಾರ್ಡ್ ವ್ಯಾಪ್ತಿಯಲ್ಲಿ 2022-23ನೇ ಸಾಲಿನಲ್ಲಿ ಕಂದಾಯ ತೆರಿಗೆ ವಾರ್ಷಿಕ ರೂ 500-00ಲಕ್ಷ ಬೇಡಿಕೆ ಇದ್ದು, ಇದೂವರೆಗೂ ರೂ: 397.00 ಲಕ್ಷಗಳು ವಸೂಲಾಗಿದ್ದು, 15 ದಿನಗಳಲ್ಲಿ ರೂ: 2.50 ಲಕ್ಷಗಳ ಕಂದಾಯ ವಸೂಲಿ ಮಾಡಿರುವುದಾಗಿ ಉಳಿದಂತೆ ಮುಂದಿನ ದಿನಗಳಲ್ಲಿ ಬಾಕಿ ಇದ್ದ ಕಂದಾಯ ವಸೂಲಾತಿಯನ್ನು ಮಾಡಲಾಗುವುದು ಎಂದು ತಿಳಿಸಿ, ಮುಂದುವರೆದು, ಮತದಾರರ ಗುರುತಿನ ಚೀಟಿ ವಿತರಣೆ ನಿರಂತರವಾಗಿ ನಡೆಯುತ್ತಿರುತ್ತದೆ ಹಾಗೂ 18 ವರ್ಷ ಮೇಲ್ಪಟ್ಟವರೆಲ್ಲರಿಗೂ ಉಚಿತವಾಗಿ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿರುತ್ತದೆ ಎಂದು ಹಾಗೂ ಸಾರ್ವಜನಿಕರು ಹೊಸದಾಗಿ ಪರಿಚಯಿಸಿರುವ ಸ್ಮಾರ್ಟ್ ಕಾರ್ಡ್ ನೀಡುವಂತೆ ಕೋರಿದ್ದು, ಈ ಸಂದರ್ಭದಲ್ಲಿ ಹಾಜರಿದ್ದ ಕಂದಾಯ ಅಧಿಕಾರಿಗಳು ತಮಗೆ ಸ್ಮಾರ್ಟ್ ಕಾರ್ಡ್‌ನ್ನು ಬೇಕಾಗಿದ್ದರೆ Voters Helpline APP ಮುಖಾಂತರ ಸ್ಮಾರ್ಟ್ ಕಾರ್ಡ್‌ಗೆ ನೋಂದಾಯಿಸಿ ಅದಕ್ಕೆ ಸಂಬಂಧಸಿದ್ದ ದರವನ್ನು ಪಾವತಿಸಿ ಪಡೆಯಬಹುದಾಗಿರುತ್ತದೆ ಎಂದು ಸಭೆಗೆ ತಿಳಿಸಿರುತ್ತಾರೆ.

5. ವಾರ್ಡ್ ವ್ಯಾಪ್ತಿಯಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯವರು ಏಕಾಏಕಿ ಯಾವುದೇ ಅನುಮತಿ ಪಡೆಯದೇ ಸಾರ್ವಜನಿಕರಿಗೆ ತೊಂದರೆಯಾಗುವ ರೀತಿ ರಸ್ತೆಯನ್ನು ಅಗೆಯುವುದು ಹಾಗೂ ಅಗೆದಿರುವ ರಸ್ತೆಯನ್ನು ದುರಸ್ಥಿ ಮಾಡದೇ ಹಾಗೆಯೇ ಬಿಟ್ಟು ಅದರಿಂದ ಸಾರ್ವಜನಿಕ ಸಂಚಾರಕ್ಕೆ ತೊಂದರೆಯುಂಟಾಗಿ ಅವಘಡಗಳು ನಡೆಯುತ್ತಿರುವ ಬಗ್ಗೆ ಪೋಲೀಸ್ ಇಲಾಖೆಯಿಂದ ದೂರವಾಣಿ ಮುಖೇನ ಸದರಿ ವಿಚಾರವನ್ನು ಪಸ್ತಾಪಿಸುತ್ತಿದ್ದು, ಮುಂದಿನ ದಿನಗಳಲ್ಲಿ ಇದೇ ರೀತಿ ಮುಂದುವರೆದಲ್ಲಿ ದಾವೆ ದಾಖಲಿಸುವುದಾಗಿ ತಿಳಿಸಿರುತ್ತಾರೆ ಈ ಸಂಧರ್ಭದಲ್ಲಿ 50 ಅಡಿರಸ್ತೆಯ 02 ಕಡೆ, ಮೌಂಟ್ ಜಾಯ್ ರಸ್ತೆಯಲ್ಲಿ ಸುಮಾರು 100.00 ಮೀಟರ್‌ಗಳು, ಅಶೋಕನಗರದ 2ನೇ ಅಡ್ಡರಸ್ತೆಯಲ್ಲಿ 15.00 ಮೀಟರ್‌ಗಳನ್ನು, ಕತ್ರಿಗುಪ್ಪೆ ಮುಖ್ಯರಸ್ತೆಯ ಅಶೋಕನಗರದ 7ನೇ ಅಡ್ಡರಸ್ತೆಯಲ್ಲಿ 13ನೇ ಅಡ್ಡರಸ್ತೆಯಲ್ಲಿ ಅಗೆದು ದುರಸ್ಥಿ ಮಾಡದೇ ಬಿಟ್ಟಿರುವುದು ಗಮನಿಸಲಾಗಿರುತ್ತದೆ. ಸದರಿ ಸ್ಥಳಗಳನ್ನು ದುರಸ್ಥಿಗೊಳಿಸುವಂತೆ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರಿಗೆ ಅಧ್ಯಕ್ಷರು ಸ್ಥಳ ಪರಿಶೀಲಿಸಿ ಕ್ರಮವಹಿಸುವಂತೆ ಸೂಚಿಸಿರುತ್ತಾರೆ.

6. ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಖಾಸಗಿ ಕಟ್ಟಡಗಳ ನಿರ್ಮಾಣದ ಬಗ್ಗೆ ಸಾರ್ವಜನಿಕರು ಪಸ್ತಾಪಿಸಿದ್ದು, ಸದರಿ ವಾರ್ಡ್‌ನಲ್ಲಿ ಕಟ್ಟಡಗಳು ಅನಧಿಕೃತ ಹಾಗೂ ವ್ಯತಿರಿಕ್ತವಾಗಿ ನಿರ್ಮಾಣವಾಗುತ್ತಿರುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಅಧ್ಯಕ್ಷರ ಗಮನಕ್ಕೆ ತಂದಿದ್ದು, ಅಧ್ಯಕ್ಷರು ವಾರ್ಡ್ ಅಭಿಯಂತರರಿಗೆ ಕ್ರಮವಹಿಸುವಂತೆ ಸಭೆಯಲ್ಲಿ ಸೂಚಿಸಿರುತ್ತಾರೆ.

7. ದಿನಾಂಕ: 12–08–2022 ರಂದು ಕೆಂಪೇಗೌಡ ಕ್ರೀಡಾಂಗಣದಲ್ಲಿ ಸ್ವಾತ್ಮಂತ್ರ ಅಮೃತ ಮಹೋತ್ಸವ ಅಂಗವಾಗಿ ಪೂರ್ವಭಾವಿ ಸಭೆಯು ಅತ್ಯಂತ ಯಶಸ್ವಿಯಾಗಿ ಅದ್ದೂರಿಯಿಂದ ನಡೆಸಲಾಯಿತು ಈ ಸಭೆಯಲ್ಲಿ ಪ್ರಮುಖವಾಗಿ ಮಾನ್ಯ ಶಾಸಕರು ನಿಕಪೂರ್ವ ಪಾಲಿಕೆ ಸದಸ್ಯರುಗಳು, ಗೌರವಾನ್ವಿತ ಗಣ್ಯವ್ಯಕ್ತಿಗಳು ವಿವಿಧ ಇಲಾಖೆಗಳ ಮುಖ್ಯಸ್ಥರುಗಳು ಹಾಗೂ ಶಾಲಾ ಕಾಲೇಜುಗಳ ಉಪಧ್ಯಾಯರು, ಶಾಳಾ ಮಕ್ಕಳು ಹಾಗೂ ಶಾಲಾ ಸಿಬ್ಬಂದಿಗಳು ಪ್ರಮುಖವಾಗಿ ಸಾರ್ವಜನಿರು ಭಾಗವಹಿಸಿ ಯಶಸ್ವಿಗೊಳಸಿರುತ್ತಾರೆ.

8. ವಾರ್ಡ್ ವ್ಯಾಪ್ತಿಯ ಎಲ್ಲಾ ಪಾರ್ಕ್‌ಗಳು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ವಾರಕ್ಕೆ ಒಂದು ಬಾರಿ ಔಷಧಿ ಸಿಂಪಡಣೆ ನಡೆಯುತ್ತಿದೆ. ಸಭೆಯಲ್ಲಿ ಹಾಜರಿದ್ದ ಶ್ರೀ ಸತೀಶ್ .ಆರ್ ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಪಾರ್ಕ್‌ಗಳು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಸೊಳ್ಳೆ ಔಷಧಿ ಸಿಂಪಡಣ ಮತ್ತು ಫಾಗಿಂಗ್ ಮಾಡಿಸುತ್ತಿರುವುದಾಗಿ ಹಾಗೂ ಕಸ ವಿಲೇವಾರಿಯಲ್ಲಿ ಯಾವುದೇ ಲೋಪದೋಷಗಳು ಆಗದಂತೆ ಕ್ರಮಕೈಗೊಂಡಿರುವುದಾಗಿ ಹಾಗೂ ಬೆಸ್ಕಾಂ ವತಿಯಿಂದ ತೆಗೆದಿರುವ ಮರದ ರೆಂಬೆಕೊಂಬೆಗಳನ್ನು ಬೆಸ್ಕಾಂ ಅಧಿಕಾರಿಗಳಿಗೆ ತಿಳಿಸುವಂತೆ ಘನತ್ಯಾಜ್ಯ ನಿರ್ವಹಣೆ ಅಧಿಕಾರಿಗಳು ಅಧ್ಯಕ್ಷರಿಗೆ ಸಭೆಯಲ್ಲಿ ತಿಳಿಸಿರುತ್ತಾರೆ.

9. ಚೆನ್ನಮ್ಮನಕೆರೆ ಅಚ್ಚುಕಟ್ಟು ಬಡಾವಣೆಯ ವ್ಯಾಪ್ತಿಯಲ್ಲಿ ಶ್ರೀಕಂಠೇಶ್ವರ ಉದ್ಯಾನವನ, ಸೂರತ್ ಅಶ್ವಥ್ ಉದ್ಯಾನವನಗಳ ಸುತ್ತಮುತ್ತಲಿನ ರಸ್ತೆಗಳಲ್ಲಿ ಬೀದಿ ಬದಿ ವ್ಯಾಪಾರಿಗಳು ಅತಿಕ್ರಮಿಸಿ ಸಾರ್ವಜನಿಕ ವಾಹನ ಸಂಚಾರಕ್ಕೆ ತುಂಬಾ ಅಡಚಣೆಯಾಗುತ್ತಿರುವ ಬಗ್ಗೆ ಮತ್ತು ಆಗಿಂದಾಗ್ಗೆ ಅಪಘಾತಗಳು ನಡೆಯುತ್ತಿರುವ ಬಗ್ಗೆ ಪೋಲೀಸ್ ಇಲಾಖೆಯಿಂದ ದೂರುಗಳು ಬರುತ್ತಿದ್ದ ಹಿನ್ನೆಲೆಯಲ್ಲಿ ರಸ್ತೆ ಮತ್ತು ಪಾದಚಾರಿ ಮಾರ್ಗವನ್ನು ಅತಿಕ್ರಮಿಸಿದ್ದ ಬೀದಿ ಬದಿ ವ್ಯಾಪಾರಿಗಳು ದಿನಾಂಕ: 20–08–2022 ರಂದು ಬೆಳಿಗ್ಗೆ ಕಾರ್ಯಪಾಲಕ ಅಭಿಯಂತರರ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು ಗಿರಿನಗರ/ ಬಸವನಗುಡಿ ಉಪವಿಭಾಗದ ನೇತೃತ್ವದಲ್ಲಿ ತೆರವುಗೊಳಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ವಲಯ ಆಯುಕ್ತರು(ದಕ್ಷಿಣ) ಬೃ.ಬೆ.ಮ.ಪಾಲಿಕೆ, ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
7. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ವಾರ್ಡ್ ಕಛೇರಿಯ ಸೂಚನಾ ಫಲಕಕ್ಕೆ
10. ಕಛೇರಿ ಪ್ರತಿ.

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ, ವಿದ್ಯಾಪೀಠ ಸರ್ಕಲ್, ಬೆಂಗಳೂರು.**

ಸಂಖ್ಯೆ: ಸ.ಅ/ವಿ.ಪೀ/ವಾ–216/01/2022–23. ದಿನಾಂಕ: 17–08–2022

**ಸಭೆಯ ಸೂಚನಾ ಪತ್ರ**

ವಿಷಯ: ಆಗಸ್ಟ–2022ರ ತಿಂಗಳ 3ನೇ ಶನಿವಾರದ ವಾರ್ಡ್ ಸಮಿತಿ ಸಭೆ.

ಉಲ್ಲೇಖ: ಮಾನ್ಯ ಆಯುಕ್ತರ ಆದೇಶ ಸಂಖ್ಯೆ: ಬಿ12(58)ಪಿಆರ್/35/2020–21, ದಿನಾಂಕ: 21–09–2020

********

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬಸವನಗುಡಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ವಿದ್ಯಾಪೀಠ ವಾರ್ಡ (ಹಳೆಯ ವಾರ್ಡ್–164) ರ ಆಗಸ್ಟ –2022ರ ತಿಂಗಳ 3ನೇ ಶನಿವಾರದ ವಾರ್ಡ್ ಸಮಿತಿ ಸಭೆಯನ್ನು ದಿನಾಂಕ: 20–08–202 ಶನಿವಾರ ಸಂಜೆ 4.00 ಗಂಟೆಗೆ ಸರಿಯಾಗಿ ಹಳೆಯ ವಾರ್ಡ ಕಛೇರಿ–164, ವಿದ್ಯಾಪೀಠ, ವಿದ್ಯಾಪೀಠ ವೃತ್ತ ಇಲ್ಲಿ ತೀರ್ಮಾನಿಸಲಾಗಿದ್ದು, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್ 216ಕ್ಕೆ ಸಂಬಂಧಿಸಿದಂತೆ ನಡೆಯುತ್ತಿರುವ ಕಾರ್ಯಗಳು, ಸಾರ್ವಜನಿಕರಿಂದ ಬಂದಂತಹ ಮನವಿಗಳು, ವಾರ್ಡ್ ವ್ಯಾಪ್ತಿಯಲ್ಲಿ ಕೈಗೊಳ್ಳಬೇಕಾಗಿರುವ ಕೆಲಸ ಕಾರ್ಯಗಳು ಘನತ್ಯಾಜ್ಯ ನಿರ್ವಹಣೆ, ಕೋವಿಡ್–19ರ ನಿಯಂತ್ರಣದ ಬಗ್ಗೆ ಮತ್ತು ಇತರೆ ವಿಷಯಗಳ ಬಗ್ಗೆ ಚರ್ಚಿಸಲು ಸಾಮಾನ್ಯ ಸ ಕರೆಯಲಾಗಿರುತ್ತದೆ. ಈ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು, ಸದಸ್ಯರು ಹಾಗೂ ಸಾರ್ವಜನಿಕರು ತಪ್ಪ ಸಭೆಗೆ ಹಾಜರಾಗಿ ಸಭೆಯ ಕಾರ್ಯಕಲಾಪಗಳನ್ನು ನಡೆಸಿಕೊಡಬೇಕೆಂದು ಈ ಮೂಲಕ ತಿಳಿಯಪಡಿಸಿದೆ.

17/08/2022

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂ: 216, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂ: 216, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ವಲಯ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಉಪ ಆಯುಕ್ತರು (ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
7. ಮಾನ್ಯ ಉಪ ನಿಯಂತ್ರಕರು (ಹಣಕಾಸು) ಕೇಂದ್ರ ವಲಯ ಹಾಗೂ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು(ಗಿರಿನಗರ) ಉಪವಿಭಾಗ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೃ.ನೀ.ಗಾ) ವಿಭಾಗ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ಬಸವನಗುಡಿ ವಿಭಾಗ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು (ಬಸವನಗುಡಿ) ಉಪವಿಭಾಗ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿ
13. ಆರೋಗ್ಯ ವೈದ್ಯಾಧಿಕಾರಿಗಳು (ಬಸವನಗುಡಿ) ವಲಯ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
14. ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಸಿ.ಟಿ ಬೆಡ್ ರವರ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
15. ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
16. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
17. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
18. ಪೋಲೀಸ್ ಅಧಿಕಾರಿಗಳು, ಸಿ.ಕೆ ಅಚ್ಚುಕಟ್ಟು / ಹನುಮಂತನಗರ ಪೋಲೀಸ್ ಠಾಣೆ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
18. ಪೋಲೀಸ್ ಅಧಿಕಾರಿಗಳು, ಸಿ.ಕೆ ಅಚ್ಚುಕಟ್ಟು / ಹನುಮಂತನಗರ ಪೋಲೀಸ್ ಠಾಣೆ ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
19. ಕೋವಿಡ್–19 ಮಾರ್ಷಲ್‌ರವರು ರವರು ಎಲ್ಲಾ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಕೋರಿದೆ/ ಕಛೇರಿ ಕಡತಕ್ಕೆ.
20. ಕಚೇರಿ ನೋಟಿಸ್ ಬೋರ್ಡಿಗೆ (ಸೂಚನಾ ಫಲಕಕ್ಕೆ).